# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ವಿಧಾನ ಪರಿಷತ್ ಸದಸ್ಯರ ಹೆಸರು: | ಶ್ರೀ ಕೆ.ಟಿ.ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) |
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: | 62(875) |
| ಉತ್ತರಿಸಬೇಕಾದ ದಿನಾಂಕ: | 21-02-2022 |
| ಉತ್ತರಿಸುವ ಸಚಿವರು: | ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖಾ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ವೈದ್ಯಕೀಯ ಶಿಕ್ಷಣ ಅಡಿಯಲ್ಲಿ ಬರುವ ಸ್ವಾಯತ್ತ ಸಂಸ್ಥೆಯ ಖಾಯಂ ನೌಕರರಿಗೆ ನಗದು ರಹಿತ ಚಿಕಿತ್ಸೆಯಾದ ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆಯನ್ನು ಜಾರಿಗೆ ತಂದಿರುವುದು ನಿಜವೇ; | ವೈದ್ಯಕೀಯ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ಸ್ವಾಯತ್ತ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಖಾಯಂ ನೌಕರರಿಗೆ ನಗದು ರಹಿತ ಚಿಕಿತ್ಸೆಯಾದ ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆಯನ್ನು ಜಾರಿಗೆ ತರುವ ಪ್ರಸ್ತಾವನೆಯು ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿದೆ. |
| ಆ) | ಹಾಗಿದ್ದಲ್ಲಿ, ವೈದ್ಯಕೀಯ ಶಿಕ್ಷಣ ಇಲಾಖೆ ಅಡಿಯಲ್ಲಿ ಬರುವ ನೌಕರರಿಗೆ ಈ ಯೋಜನೆಯನ್ನು ಜಾರಿಗೆ ತರಲು ಇರುವ ತೊಡಕುಗಳಾವುವು; | |
| ಇ) | ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯವು ಸಾರ್ವಜನಿಕ ಹಿತಾಸಕ್ತಿ ಅರ್ಜಿ ಪರಿಗಣಿಸಿ, ದಿನಾಂಕ:16.09.2020ರಂದು ರಿಟ್ ನಂ.9117/2020 ಪ್ರಕಾರ ಒಂದು ತಿಂಗಳ ಒಳಗೆ ಸೂಕ್ತ ವ್ಯವಸ್ಥೆಯನ್ನು ಮಾಡಲು ಆದೇಶಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಈ) | ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳಾವುವು; | ಮಾನ್ಯ ಉಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ:9117/2020ರ ಆದೇಶದಂತೆ ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯದ ನಿರ್ದೇಶಕರ ಅಧ್ಯಕ್ಷತೆಯಲ್ಲಿ ತಾಂತ್ರಿಕ ಸಮಿತಿಯನ್ನು ರಚಿಸಲಾಗಿರುತ್ತದೆ. ಸದರಿ ಸಮಿತಿಯು ದಿನಾಂಕ:08-11-2021ರ ಸಭಾ ನಡವಳಿಗಳಂತೆ ರಾಜ್ಯದ ಇತರ ಖಾಯಂ ಸರ್ಕಾರಿ ನೌಕರರುಗಳಿಗೆ ನೀಡಲಾಗುತ್ತಿರುವ ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ (ಕೆ.ಎ.ಎಸ್.ಎಸ್.)ಯನ್ನು ವೈದ್ಯಕೀಯ ಶಿಕ್ಷಣ ಇಲಾಖೆಯ ಖಾಯಂ ಸಿಬ್ಬಂದಿಗಳಿಗೆ ವಿಸ್ತರಿಸಲು ಶಿಫಾರಸ್ಸು ಮಾಡಲಾಗಿರುತ್ತದೆ. ಹಟ್ಟಿ ಗೋಲ್ಡ್ ಮೈನ್ಸ್ ಸಂಸ್ಥೆಯ ನೌಕರರಿಗೆ ಈ ಸೌಲಭ್ಯವನ್ನು ವಿವರಿಸಿರುವ ಮಾದರಿಯಲ್ಲಿಯೇ ವಿಸ್ತರಿಸುವ ಪ್ರಸ್ತಾವನೆಯು ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿದೆ. |

ಸಂಖ್ಯೆ: ಎಂಇಡಿ 86 ಎಂಪಿಎಸ್ 2022

(ಡಾ.ಕೆ.ಸುಧಾಕರ್)
ವೈದ್ಯಕೀಯ ಶಿಕ್ಷಣ ಹಾಗೂ ಆರೋಗ್ಯ ಮತ್ತು
ಕುಟುಂಬ ಕಲ್ಯಾಣ ಇಲಾಖಾ ಸಚಿವರು